ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆ: **1104/2025**

ಪಿರ್ಯಾದಿ : ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,
ಮೂಡಿಗೆರೆ ತಾಲ್ಲೂಕು.

ವಿರುದ್ಧ

ಆರೋಪಿತರು : **1.** ಶ್ರೀಧರ ಎಂ.ಎ., ವಯಸ್ಸು ಸುಮಾರು 59 ವರ್ಷ,
ಬಿನ್ ದಿ: ಅಂಡಿಯಪ್ಪ, ವಾಸ: ನಾಗಲಾಪುರ,
ಮಾಕೋನಹಳ್ಳಿ ಗ್ರಾಮ, ಮೂಡಿಗೆರೆ ತಾಲ್ಲೂಕು.

**2.** ಹರೀಶ ಪಿ., ವಯಸ್ಸು ಸುಮಾರು 42 ವರ್ಷ,
ಬಿನ್ ದಿ: ಪುಟ್ಟೇಗೌಡ, ಮದುರ ಬಾರ್ ಅಂಡ್
ರೆಸ್ಟೋರೆಂಟ್ ನಲ್ಲಿ ಕ್ಯಾಷಿಯರ್ ಕೆಲಸ,
ವಾಸ: ಕಾಳೀಕಟ್ಟೆ, ಜಾವಳಿ ಗ್ರಾಮ,
ಬಾಳೂರು ಹೋಬಳಿ, ಮೂಡಿಗೆರೆ ತಾಲ್ಲೂಕು.

ದೋಷಾರೋಪಣೆ

ಶ್ರೀ ವಿಶ್ವನಾಥ್.ಎ, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆ:-

ದಿನಾಂಕ 17.01.2025 ರಂದು ಸಂಜೆ 04.10 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಮೂಡಿಗೆರೆ ತಾಲ್ಲೂಕು ಮಾಕೋನಹಳ್ಳಿ ಗ್ರಾಮದ ನಾಗಲಾಪುರದಲ್ಲಿರುವ 1 ನೇ ಆರೋಪಿಯಾದ ನೀವು ನಿಮ್ಮ ದಿನಸಿ ಅಂಗಡಿಯಲ್ಲಿ ಅಕ್ರಮವಾಗಿ ಲಾಭ ಗಳಿಸುವ ಉದ್ದೇಶದಿಂದ ಯಾವುದೇ ಪರವಾನಗಿ ಇಲ್ಲದೇ ಕಾನೂನು ಬಾಹಿರವಾಗಿ 90 ಎಂ.ಎಲ್ ನ 44, ನಂ.1 ಹೈವೆ ಡಿಲೆಕ್ಸ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್ ಗಳನ್ನು ನಿಮ್ಮ ವಶದಲ್ಲಿಟ್ಟುಕೊಂಡಿದ್ದು, ಪೊಲೀಸರು ನಡೆಸಿದ ದಾಳಿ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ 1 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **32** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 1 ನೇ ಆರೋಪಿಯಾದ ನೀವು 90 ಎಂ.ಎಲ್ ನ 44, ನಂ.1 ಹೈವೆ ಡಿಲೆಕ್ಸ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು ಯಾವುದೇ ಪಾಸ್ ಅಥವಾ ಪರವಾನಗಿ ಇಲ್ಲದೇ ಅಕ್ರಮವಾಗಿ ನಿಮ್ಮ ವಶದಲ್ಲಿಟ್ಟುಕೊಂಡು ಪೊಲೀಸರು ನಡೆಸಿದ ದಾಳಿ ಕಾಲಕ್ಕೆ

ಸಿಕ್ಕಿರುತ್ತೀರಿ. ಈ ರೀತ್ಯಾ 1 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

**3.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ 2 ನೇ ಆರೋಪಿಯಾದ ನೀವು 90 ಎಂ.ಎಲ್ ನ 44, ನಂ.1 ಹೈವೆ ಡಿಲೆಕ್ಸ್ ವಿಸ್ಕಿಯ ಮದ್ಯ ತುಂಬಿದ ಟೆಟ್ರಾ ಪ್ಯಾಕೆಟ್‌ಗಳನ್ನು 1 ನೇ ಆರೋಪಿಗೆ ಪರ್ಮಿಟ್ ನಲ್ಲಿ ಕಂಡ ಮಿತಿಗಿಂತ ಹೆಚ್ಚಾಗಿ ಮದ್ಯವನ್ನು ಮಾರಾಟ ಮಾಡಿರುತ್ತೀರಿ. ಈ ರೀತ್ಯಾ 2 ನೇ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ **36(1)(ಬಿ)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ***?***

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರ: 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ***?*** ಅವುಗಳು ನಿಮಗೆ ಅರ್ಥವಾಯಿತೇ***?***

1 ನೇ ಆರೋಪಿಯ ಉತ್ತರ:

2 ನೇ ಆರೋಪಿಯ ಉತ್ತರ:

ಪ್ರ: 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ***?***

1 ನೇ ಆರೋಪಿಯ ಉತ್ತರ:

2 ನೇ ಆರೋಪಿಯ ಉತ್ತರ:

***(***ದಿನಾಂಕ 15.09.2025 ರಂದು ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ***)***

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.

ಮೂಡಿಗೆರೆ
ದಿನಾಂಕ: 15.09.2025

1 ನೇ ಆರೋಪಿಯ ಸಹಿ

2 ನೇ ಆರೋಪಿಯ ಸಹಿ